**All India Radio: Bangalore**
**Regional Bulletin In Kannada**
**20.05.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.05.2026 / 2.30 p.m.**

**<><><><>**

ಮುಖ್ಯಾಂಶಗಳು

1. ಜೂನ್ ೧ರಂದು ಕರ್ನಾಟಕ ಪಬ್ಲಿಕ್ ಸ್ಕೂಲ್ ಯೋಜನೆಗೆ ಚಾಲನೆ -ಮುಖ್ಯಮಂತ್ರಿ ಸಿದ್ದರಾಮಯ್ಯ
2. ಆಗಸ್ಟ್ ೩೧ರೊಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ೫ ಪಾಲಿಕೆಗಳಿಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ಸುಪ್ರೀಂಕೋರ್ಟ್ ಗಡುವು
3. ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ಹಿನ್ನೆಲೆ : ರೈತರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮಾಲೋಚನೆ
4. ಆನ್‌ಲೈನ್ ಔಷಧ ಮಾರಾಟ ವಿರೋಧಿಸಿ ಕರೆ ನೀಡಿದ್ದ ಔಷಧಾಲಯಗಳ ಬಂದ್‌ಗೆ ರಾಜ್ಯದಲ್ಲಿ ಮಿಶ್ರ ಪ್ರತಿಕ್ರಿಯೆ
5. ಜೀವ ವೈವಿಧ್ಯ ಕಾಯ್ದೆಗೆ ಮರುಜೀವ ನೀಡುವಂತೆ ಅರಣ್ಯ ಸಚಿವರಿಗೆ ಪರಿಸರವಾದಿ ಅನಂತ ಹೆಗಡೆ ಅಶೀಸರ ಬಹಿರಂಗ ಪತ್ರ

<><><><>

ಜೂನ್ ೧ರಂದು ಕರ್ನಾಟಕ ಪಬ್ಲಿಕ್ ಸ್ಕೂಲ್ ಯೋಜನೆಗೆ ಶಿವಮೊಗ್ಗದಲ್ಲಿ ಚಾಲನೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಗೃಹ ಕಚೇರಿ ಕೃಷ್ಣಾದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಈ ವರ್ಷ ೮೦೦ ಕರ್ನಾಟಕ ಪಬ್ಲಿಕ್ ಸ್ಕೂಲ್ ಆರಂಭಿಸಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚನೆ ನೀಡಿದ್ದಾರೆ. ೧೫ ಸಾವಿರ ಶಿಕ್ಷಕರನ್ನು ಭರ್ತಿ ಮಾಡುವ ಕುರಿತು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ತಕ್ಷಣ ಸಲ್ಲಿಸಲು ನಿರ್ದೇಶನ ನೀಡಿದ್ದಾರೆ. ಕೆಪಿಎಸ್ ಶಾಲೆಯಲ್ಲಿ ೧ ಸಾವಿರದ ೨೦೦ ಮಕ್ಕಳಿಗೆ ಪ್ರವೇಶ ಅವಕಾಶ ಸಿಗಲಿದ್ದು, ಎಲ್‌ಕೆಜಿಯಿಂದ ಪಿಯುಸಿವರೆಗೆ ಒಂದೇ ಕಡೆ ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ

ಶಿಕ್ಷಣ ದೊರೆಯಲಿದೆ. ಈ ಹಿನ್ನೆಲೆಯಲ್ಲಿ ಮುಂದಿನ ೨ ವರ್ಷಗಳಲ್ಲಿ ಎಲ್ಲಾ ೮೦೦ ಶಾಲೆಗಳು ಸಂಪೂರ್ಣವಾಗಿ ಸಿದ್ಧವಾಗಬೇಕು ಎಂದು ಸಭೆಯಲ್ಲಿ ತಿಳಿಸಿದ್ದಾರೆ. ಈ ಬಾರಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಫಲಿತಾಂಶ ಉತ್ತಮಗೊಳ್ಳಲು ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಶಿಕ್ಷಣ ಸಚಿವ ಮಧುಬಂಗಾರಪ್ಪ ಸಭೆಯಲ್ಲಿ ಮಾಹಿತಿ ನೀಡಿದ್ದಾರೆ.

<><><>

ಆಗಸ್ಟ್ ೩೧ರೊಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ೫ ಪಾಲಿಕೆಗಳಿಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ಸುಪ್ರೀಂಕೋರ್ಟ್ ಗಡುವು ವಿಧಿಸಿದೆ. ಸೆಪ್ಟೆಂಬರ್ ಅಂತ್ಯದವರೆಗೆ ಕಾಲಾವಕಾಶ ಕೋರಿ ರಾಜ್ಯ ಸರ್ಕಾರ ಹಾಗೂ ರಾಜ್ಯ ಚುನಾವಣಾ ಆಯೋಗದ ಮನವಿ ಆಲಿಸಿದ ಮುಖ್ಯ ನ್ಯಾಯಮೂರ್ತಿ ಅವರನ್ನು ಒಳಗೊಂಡ ನ್ಯಾಯಪೀಠ ಈ ಆದೇಶ ನೀಡಿದೆ. ರಾಜ್ಯ ಸರ್ಕಾರ ಮತ್ತು ರಾಜ್ಯ ಚುನಾವಣಾ ಆಯೋಗ ಸಲ್ಲಿಸಿದ ಎರಡು ಪ್ರತ್ಯೇಕ ಅರ್ಜಿಗಳಲ್ಲಿ ಸಿಬ್ಬಂದಿ, ಜನಗಣತಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಮಂಡಳಿಯ ಪರೀಕ್ಷೆಗಳಲ್ಲಿ ನಿರತರಾಗಿದ್ದಾರೆ. ಹೀಗಾಗಿ ಜೂನ್ ೩೦ರಿಂದ ಅನ್ವಯವಾಗುವಂತೆ ಹೆಚ್ಚುವರಿ ೩ ತಿಂಗಳ ಕಾಲಾವಕಾಶ ನೀಡುವಂತೆ ಮನವಿ ಮಾಡಲಾಗಿತ್ತು. ಇದೇ ಅಂತಿಮ ಅವಕಾಶವಾಗಿದ್ದು, ಮತ್ತಷ್ಟು ವಿಸ್ತರಣೆ ನೀಡಲಾಗುವುದಿಲ್ಲ ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿ ಜಾಯ್ಮಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿಪುಲ್ ಪಂಚೋಲಿ ಅವರನ್ನೊಳಗೊಂಡ ಪೀಠ ಸ್ಪಷ್ಟಪಡಿಸಿದೆ.

<><><>

ಬಿಡದಿ ಟೌನ್‌ಶಿಪ್‌ಗೆ ರೈತರ ವಿರೋಧದ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಇಂದು ರೈತ ಪ್ರತಿನಿಧಿಗಳ ಜೊತೆ ಸಮಾಲೋಚನೆ ನಡೆಸಿ ಯೋಜನೆ ಕುರಿತಂತೆ ಚರ್ಚೆ ನಡೆಸಿದ್ದಾರೆ. ಸಭೆಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯ ಸಾಧಕ-ಬಾಧಕಗಳ ಕುರಿತಂತೆ ರೈತರಿಗೆ ಉಪಮುಖ್ಯಮಂತ್ರಿ ಮನವರಿಕೆ ಮಾಡಿದ್ದಾರೆ. ಶಾಸಕ ಬಾಲಕೃಷ್ಣ, ರೈತ ಮುಖಂಡರಾದ ರಾಜಣ್ಣ ಹೊಸೂರು ಸೇರಿದಂತೆ ನೂರಾರು ರೈತರು ಸಭೆಯಲ್ಲಿ ಭಾಗವಹಿಸಿದ್ದಾರೆ.

<><><>

ದೇಶದಲ್ಲಿ ಇ-ಫಾರ್ಮಸಿ ಹಾಗೂ ಆನ್ಲೈನ್ ಮೂಲಕ ಔಷಧ ಮಾರಾಟವನ್ನು ವಿರೋಧಿಸಿ ಇಂದು ದೇಶವ್ಯಾಪಿ ಕರೆ ನೀಡಿರುವ ಬಂದ್‌ಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಔಷಧಿ ವ್ಯಾಪಾರಿಗಳು, ಔಷಧಿ ಅಂಗಡಿಗಳನ್ನು ಕೆಲ ಕಾಲ ಸ್ಥಗಿತಗೊಳಿಸುವ ಮೂಲಕ ಬೆಂಬಲ ವ್ಯಕ್ತಪಡಿಸಿದ್ದಾರೆ. ಇ-ಮೆಡಿಸಿನ್ ನೀತಿ ವಿರೋಧಿಸಿ ವಿವಿಧ ಸಂಘಟನೆಗಳು ಇಂದು ಕರೆ ನೀಡಿರುವ 'ಮೆಡಿಕಲ್ ಶಾಪ್ ಬಂದ್'ಗೆ ದಾವಣಗೆರೆ ಜಿಲ್ಲೆಯಲ್ಲಿ ಯಾವುದೇ ಬೆಂಬಲ ವ್ಯಕ್ತವಾಗಿಲ್ಲ. ಆನ್‌ಲೈನ್ ಔಷಧ ಮಾರಾಟ ವಿರೋಧಿಸಿ ಕರೆ ನೀಡಿದ್ದ ಬಂದ್‌ಗೆ ಚಾಮರಾಜನಗರ ಜಿಲ್ಲೆಯಲ್ಲಿ ನೈತಿಕ ಬೆಂಬಲ ವ್ಯಕ್ತಪಡಿಸಿ ಔಷಧಾಲಯಗಳನ್ನು ತೆರೆಯಲಾಗಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಕೇವಲ ನೈತಿಕ ಬೆಂಬಲ ಮಾತ್ರ ನೀಡಲಾಗಿದೆ. ವಿವಿಧ ಸಂಘಟನೆಗಳು ಕರೆ ನೀಡಿರುವ 'ಮೆಡಿಕಲ್ ಶಾಪ್ ಬಂದ್'ಗೆ ಕೋಲಾರ ಜಿಲ್ಲೆಯಲ್ಲಿ ಯಾವುದೇ ಬೆಂಬಲ ವ್ಯಕ್ತವಾಗಿಲ್ಲ. ಔಷಧಾಲಯಗಳು ಎಂದಿನಂತೆ ಕಾರ್ಯ ನಿರ್ವಹಿಸುತ್ತಿವೆ.

<><><><>

ರಾಜ್ಯ ಪೊಲೀಸ್ ದತ್ತಾಂಶ ಕೇಂದ್ರಕ್ಕೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲ್ಪಟ್ಟ ಐಎಸ್‌ಒ/ಐಇಸಿ ೨೭೦೦೧ ಪ್ರಮಾಣೀಕರಣ ದೊರೆತಿದೆ. ಇಲಾಖೆ ಒಳಗೆ ಬಳಸಲಾಗುವ ವಿವಿಧ ಸಾಫ್ಟ್‌ವೇರ್ ಅಪ್ಲಿಕೇಷನ್‌ಗಳನ್ನು ಕಾರ್ಯಗತಗೊಳಿಸಲು ಮತ್ತು ಇಲಾಖಾ ದತ್ತಾಂಶದ ಸುರಕ್ಷಿತ ಸಂಗ್ರಹಣ, ಸಂಸ್ಕರಣೆ ಮತ್ತು ನಿರ್ವಹಣೆಗಾಗಿ ಮೀಸಲಾದ ದತ್ತಾಂಶ ಕೇಂದ್ರವನ್ನು ಕಾರ್ಯಗತಗೊಳಿಸಿದ ಮೊದಲ ಪೊಲೀಸ್ ಪಡೆಗಳಲ್ಲಿ ರಾಜ್ಯ ಪೊಲೀಸ್ ಇಲಾಖೆ ಒಂದಾಗಿದೆ. ಅಪರಾಧ ದಾಖಲೆಗಳು, ಪೊಲೀಸ್ ಐಟಿ ವ್ಯವಸ್ಥೆಗಳ ಅಪರಾಧ ಮತ್ತು ಅಪರಾಧ ಟ್ರ್ಯಾಕಿಂಗ್ ನೆಟ್‌ವರ್ಕ್ ಮತ್ತು ವ್ಯವಸ್ಥೆಗಳು, ಸ್ವಯಂಚಾಲಿತ, ಬೆರಳಚ್ಚು ಗುರುತು ಪತ್ತೆ ಹಚ್ಚುವಿಕೆ ವಿಧಾನ, ಸೈಬರ್ ಅಪರಾಧ ಮಾಹಿತಿ ವ್ಯವಸ್ಥೆಗಳು, ಸ್ಮಾರ್ಟ್ ಇ-ಬಿಟ್ ಸೇರಿದಂತೆ ಹಲವಾರು ಸೇವೆಗಳನ್ನು ರಾಜ್ಯ ಪೊಲೀಸ್ ಇಲಾಖೆಯ ಡೇಟಾ ಕೇಂದ್ರ ಸುರಕ್ಷಿತವಾಗಿ ನಿರ್ವಹಿಸಿದ ಹಿನ್ನೆಲೆಯಲ್ಲಿ ಈ ಪ್ರಮಾಣಿಕರಣ ನೀಡಲಾಗಿದೆ.

<><><><>

ಅಂತಾರಾಷ್ಟ್ರೀಯ ಜೀವ ವೈವಿಧ್ಯ ದಿನಾಚರಣೆ ಸಂದರ್ಭದಲ್ಲಿ ಜೀವವೈವಿಧ್ಯ ಕಾಯ್ದೆಗೆ ಜೀವ ನೀಡುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರಿಗೆ ಪರಿಸರವಾದಿ, ವೃಕ್ಷ ಲಕ್ಷ ಆಂದೋಲನದ ಅಧ್ಯಕ್ಷ ಅನಂತ ಹೆಗಡೆ ಅಶೀಸರ ೧೩ ಅಂಶಗಳ ಬಹಿರಂಗ ಪತ್ರ ಬರೆದಿದ್ದಾರೆ. ಇಪ್ಪತ್ತು

ವರ್ಷಗಳಿಂದ ಜೀವ ವೈವಿಧ್ಯ ಸಂರಕ್ಷಣಾ ಕಾಯ್ದೆ ರಾಜ್ಯದಲ್ಲಿ ಜಾರಿಯಲ್ಲಿದ್ದರೂ ಅದನ್ನು ಅನುಷ್ಠಾನ ಮಾಡಬೇಕಿರುವ ಅರಣ್ಯ ಅಧಿಕಾರಿಗಳು ಎಲ್ಲೂ ಈ ಕಾಯ್ದೆ ಉಲ್ಲಂಘನೆ ಪ್ರಕರಣ ದಾಖಲಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನ್ಯಾಯಾಧೀಶರು, ವಕೀಲರಿಗೆ ಜೀವ ವೈವಿಧ್ಯ ಕಾನೂನಿನ ಬಗ್ಗೆ, ಜೀವವೈವಿಧ್ಯ ಮಂಡಳಿಯೇ ಮುಂದಾಗಿ ಸಂವಹನ ನಡೆಸಬೇಕು ಎಂದು ಸಲಹೆ ನೀಡಿದ್ದಾರೆ. ಪಶ್ಚಿಮಘಟ್ಟದ ಅಪಾರ ಜೀವ ಸಂಕುಲ ನಾಶವಾಗುತ್ತಿದ್ದರೂ, ಜೀವ ವೈವಿಧ್ಯ ಕಾಯ್ದೆಯಡಿ ರಕ್ಷಣೆ ನೀಡಲಾಗುತ್ತಿಲ್ಲ. ಗೋಮಾಳ, ಜಲಚರ, ದೇವರ ಕಾಡು, ಔಷಧಿ ಮೂಲಿಕೆಗಳು ಜೆಬಿಸಿ ಕಾರ್ಯಾಚರಣೆಗೆ ನಶಿಸಿಹೋಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><><>

ರಾಜ್ಯ ಸರ್ಕಾರ ಗ್ಯಾರಂಟಿ ಹೆಸರಿನಲ್ಲಿ ರಾಜ್ಯವನ್ನು ಲೂಟಿ ಮಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಹಾಲು, ವಿದ್ಯುತ್, ನೀರು, ಬಸ್, ಆಸ್ತಿ ತೆರಿಗೆ, ಸ್ಟ್ಯಾಂಪ್ ಡ್ಯೂಟಿ, ಕಸದ ಸುಂಕ ಏರಿಕೆ ಮಾಡುವುದರ ಮೂಲಕ ಸರ್ಕಾರ ಜನರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ದೂರಿದ್ದಾರೆ. ದೇಶದಲ್ಲಿ ರೈತರ ಆತ್ಮಹತ್ಯೆ ಪ್ರಮಾಣ ಕಡಿಮೆಯಾಗುತ್ತಿದ್ದರೆ ರಾಜ್ಯದಲ್ಲಿ ಶೇಕಡ ೨೨ಕ್ಕೂ ಹೆಚ್ಚು ಆತ್ಮಹತ್ಯೆ ಪ್ರಕರಣಗಳು ಏರಿಕೆಯಾಗಿವೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><><>

ಚಾಮರಾಜನಗರ ಜಿಲ್ಲೆಯಲ್ಲಿ ಚಿರತೆಗೆ ವಿಷಪ್ರಾಷಣ ಮಾಡಿ ಕೊಂದಿದ್ದ ಆರೋಪಿಯನ್ನು ಬಿಳಿಗಿರಿರಂಗನಾಥ ದೇವಾಲಯದ ಹುಲಿ ಸಂರಕ್ಷಿತ ಪ್ರದೇಶದ ಅಧಿಕಾರಿಗಳು ಬಂಧಿಸಿದ್ದಾರೆ. ಚಾಮರಾಜನಗರ ತಾಲೂಕಿನ ಕೊತ್ತಲವಾಡಿ ಗ್ರಾಮದ ದೊರೆಸ್ವಾಮಿ ಬಂಧಿತ ಆರೋಪಿ. ಹಸುವನ್ನು ಚಿರತೆ ಬಲಿ ಪಡೆದ ಪ್ರತಿಕಾರಕ್ಕಾಗಿ ಹಸುವಿನ ಕಳೇಬರಕ್ಕೆ ಕ್ರಿಮಿನಾಶಕ ಸಿಂಪಡಿಸಿ ಇಡಲಾಗಿತ್ತು. ಕಳೆದ ೧೦ ತಿಂಗಳಿನಿಂದ ತಲೆ ಮರೆಸಿಕೊಂಡಿದ್ದ ಆರೋಪಿಯನ್ನು ಚಾಮರಾಜನಗರ ಪ್ರಾದೇಶಿಕ ವಲಯ ಸಿಬ್ಬಂದಿ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

<><><>

ಹಾವೇರಿ ಜಿಲ್ಲೆಯ ಸಾಮಾಜಿಕ ಅರಣ್ಯ ವಿಭಾಗ ರೈತರು ಮತ್ತು ಸಾರ್ವಜನಿಕರಿಗೆ ರಿಯಾಯಿತಿ ದರದಲ್ಲಿ ಒಂದು ಲಕ್ಷಕ್ಕೂ ಅಧಿಕ ವಿವಿಧ ಜಾತಿಯ ಸಸಿಗಳನ್ನು ವಿತರಿಸಲು ಸಿದ್ಧತೆ ನಡೆಸಿದೆ. ಸಾಗವಾನಿ, ಬಿದಿರು, ಮಹಾಗನಿ, ಹೆಬ್ಬೆವು, ಕರಿಬೇವು, ನಿಂಬೆ, ಶ್ರೀಗಂಧ ಸೇರಿದಂತೆ ವಿವಿಧ

ಜಾತಿಯ ಸಸಿಗಳನ್ನು ಮುಂಗಾರು ಮಳೆಯ ಆರಂಭದಲ್ಲಿ ವಿತರಣೆಗೆ ಸಿದ್ಧಗೊಳಿಸಲಾಗಿದ್ದು, ರೈತರು ಸಸಿಗಳನ್ನು ಪಡೆದು ನಾಟಿ ಮಾಡಬಹುದು ಎಂದು ಹಾವೇರಿ ಸಾಮಾಜಿಕ ಅರಣ್ಯ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಚಂದ್ರಶೇಖರಗೌಡ ಪಾಟೀಲ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಚಂದ್ರಶೇಖರಗೌಡ ಪಾಟೀಲ್**

<><><><>

ಕೃಷಿ ಇಲಾಖೆಯ ವಿವಿಧ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಅನು?ನಕ್ಕೆ ಸಂಬಂಧಿಸಿದಂತೆ ರಾಜ್ಯ ಮಟ್ಟದಲ್ಲಿ ನಡೆದ ಕಾರ್ಯಾಗಾರದಲ್ಲಿ ದಾವಣಗೆರೆ ಜಿಲ್ಲೆ ಪ್ರಥಮ ಸ್ಥಾನ ಗಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>